**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯದಲ್ಲಿ, ತರೀಕೆರೆ.**

**ಸಿ.ಸಿ. 462/2024**

ಪಿರ್ಯಾದುದಾರರು ಃ ಸರ್ಕಾರದ ಪರವಾಗಿ ತರೀಕೆರೆ ಪೊಲೀಸರಿಂದ

-ವಿರುದ್ಧ-

ಆರೋಪಿ/ತರು ಃ ಅಜಯ್ ಕುಮಾರ್ ಯಾನೆ ನಿತಿನ್ ನಾಯರ್

**-ಃದೋಷಾರೋಪಣೆಃ-**

ಶ್ರೀ ವೈದ್ಯ ಶ್ರೀಕಾಂತ್, ಬಿ.ಎಸ್ಸಿ., ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ ಆದ ನಾನು ಈ ಕೆಳಗೆ ಕಾಣಿಸಿರುವಃ

ಅಜಯ್ ಕುಮಾರ್ ಯಾನೆ ನಿತಿನ್ ನಾಯರ್ ಬಿನ್ ಚಂದ್ರನ್ ಪಿಳ್ಳೈ, 28 ವರ್ಷ, ವಾಸಃಅನಂತ ನಗರ, 2 ನೇ ಪೇಸ್, ಎಸ್ ಎಲ್ ಎನ್ ಪಿ ಜಿ ಎಲೆಕ್ಟ್ರಾನಿಕ್ ಸಿಟಿ, ಬೆಂಗಳೂರು, ಸ್ವಂತ ಊರು ಜೋಗ್ ಫಾಲ್ಸ್ ಶಿವಮೊಗ್ಗ ಜಿಲ್ಲೆ.

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಎಂದರೆಃ

ಚಾಸಾ-1 ರವರು ಬೆಂಗಳೂರು ಇನ್ಫೋಸಿಸ್ ಟೆಕ್ನಲಾಜಿಸ್ ನಲ್ಲಿ ಕೆಲಸ ಮಾಡುವ ಸಮಯದಲ್ಲಿ ವಾಟರ್ ಪಿಲ್ಟರ್ ಟೆಕ್ನೀಷಿಯನ್ ಆಗಿ ಕೆಲಸ ಮಾಡುತ್ತಿದ್ದ ಆರೋಪಿಯಾದ ನಿಮ್ಮೊಂದಿಗೆ ಸ್ನೇಹ ಬೆಳೆಸಿದ್ದು, ಆರೋಪಿಯಾದ ನೀವು ಚಾಸಾ-1 ರವರ ಕುಟುಂಬಕ್ಕೆ ಉತ್ತಮ ಸ್ನೇಹಿತನಾಗಿದ್ದು, ಚಾಸಾ-1 ಮತ್ತು ಆರೋಪಿಯಾದ ನೀವು ಬೈಕ್ ನಲ್ಲಿ ಲಾಂಗ್ ಡ್ರೈವ್ ಹೋಗಲು ಹೊರಟು ದಿನಾಂಕಃ29.03.2024 ರಂದು ಬೆಳಗಿನ ಜಾವ 1-00 ಗಂಟೆಗೆ ತರೀಕೆರೆ ಮಾರ್ಗವಾಗಿ ಬಂದು ತರೀಕೆರೆ ಎನ್ ಹೆಚ್ - 206 ರಸ್ತೆಯ ಬದಿಯಲ್ಲಿನ ಬಾಲಾಜಿ ಲಾಡ್ಜ್ ಗೆ ಹೋಗಿ ರೂಮ್ ನಂ.210 ನ್ನು ಚಾಸಾ-6 ರವರಿಂದ ಪಡೆದುಕೊಂಡು ತಂಗಿದ್ದು, ಆ ಸಮಯದಲ್ಲಿ ಆರೋಪಿಯಾದ ನೀವು ಚಾಸಾ-1 ರವರ ಮಾನಕ್ಕೆ ಭಂಗ ಬರುವಂತೆ ವರ್ತಿಸಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**354** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಆರೋಪಿಯಾದ ನೀವು ಚಾಸಾ-1 ರವರಿಗೆ ಕೈಯಿಂದ ಮುಖಕ್ಕೆ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**323** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿಃ15.04.2025

Sd/-
ಹಿ. ಪ್ರಧಾನ ಪ್ರದನ್ಯಾದಂ, ತರೀಕೆರೆ.

ಪ್ರಃ 1) ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?
ಉಃ

ಪ್ರಃ 2) ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?

ಉಃ

(ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನಾನೇ ಸ್ವತಃ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)

ದಿನಾಂಕಃ15.04.2025

Sd/-
ಹಿ. ಪ್ರಧಾನ ಪ್ರ.ದ.ನ್ಯಾ.ದಂ ತರೀಕೆರೆ.

ಆರೋಪಿತರ ಸಹಿಃ